**<u>ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಛಲವಾದಿ ನಾರಾಯಣಸ್ವಾಮಿ ಇವರ ನಿಯಮ 72 ರಡಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ</u>**

**ಪ್ರಶ್ನೆ**

**ಕರ್ನಾಟಕ ರಾಜ್ಯದಲ್ಲಿ ಇರುವ ಕರ್ನಾಟಕ ರಾಜ್ಯ ಸಹಕಾರ ಅಪೆಕ್ಸ್ ಬ್ಯಾಂಕ್ ನಿ., ಮತ್ತು ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ನಿಯಮಿತದ ನಿರ್ದೇಶಕರ ಮಂಡಳಿಗೆ ಚುನಾವಣೆ ನಡೆಸುವ ಸಂದರ್ಭದಲ್ಲಿ ಮಹಿಳೆಯರಿಗೆ, ಹಿಂದುಳಿದ ವರ್ಗದವರಿಗೆ, ಪರಿಶಿಷ್ಟ ಪಂಗಡದವರಿಗೆ ಮತ್ತು ಪರಿಶಿಷ್ಟ ಜಾತಿಯವರಿಗೆ ಮೀಸಲಾತಿಯನ್ನು ನಿಗದಿಪಡಿಸದೆ ಇದ್ದು, ಸದರಿ ಜನಾಂಗಗಳಿಗೆ ಅನ್ಯಾಯವಾಗಿರುತ್ತದೆ. ಈ ಎಲ್ಲಾ ಸಮುದಾಯಗಳು ಮೀಸಲಾತಿಯಿಂದ ವಂಚಿತರಾಗುತ್ತಿದ್ದು, ಈ ವಿಷಯದ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯಬಯಸುತ್ತೇನೆ.**

**ಉತ್ತರ**

ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 28ಎ ರೀತ್ಯಾ ಬಿಡಿ ವ್ಯಕ್ತಿಗಳನ್ನು ಸದಸ್ಯರಾಗಿ ಹೊಂದಿರುವ ಪ್ರಾಥಮಿಕ ಸಹಕಾರ ಸಂಘಗಳ ಆಡಳಿತ ಮಂಡಲಿಯಲ್ಲಿ ಮೀಸಲಾತಿಯನ್ನು ಕಲ್ಪಿಸಲಾಗಿರುತ್ತದೆ.

**ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಕಲಂ 28-ಎ (3)ರಲ್ಲಿ**

(i) ಪರಿಶಿಷ್ಟ ಜಾತಿಗೆ ಸೇರಿದ ವ್ಯಕ್ತಿಗಳ ಒಂದು ಸ್ಥಾನವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿದ ವ್ಯಕ್ತಿಗಳ ಒಂದು ಸ್ಥಾನವನ್ನು ಚುನಾವಣೆಯ ಮೂಲಕ ಭರ್ತಿ ಮಾಡತಕ್ಕದ್ದು.

(ii) ಎರಡು ಸ್ಥಾನಗಳನ್ನು ಮಹಿಳೆಯರಿಂದ ಚುನಾವಣೆ ಮೂಲಕ ಭರ್ತಿ ಮಾಡತಕ್ಕದ್ದು.

(iii) ಅಂಥ ರೀತಿಯಲ್ಲಿ ನಿಯಮಿಸಬಹುದಾದಂತೆ, ಹಿಂದುಳಿದ ವರ್ಗದವರಿಗೆ ಎರಡು ಸ್ಥಾನಗಳನ್ನು ಚುನಾವಣೆಯ ಮೂಲಕ ಭರ್ತಿ ಮಾಡತಕ್ಕದ್ದು.

ಕರ್ನಾಟಕ ರಾಜ್ಯ ಸಹಕಾರ ಅಪೆಕ್ಸ್ ಬ್ಯಾಂಕ್ ನಿ., ಇದು ಅಪೆಕ್ಸ್ ಸಂಸ್ಥೆಯಾಗಿದ್ದು ಹಾಗೂ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳು ಫೆಡರಲ್ ಸಂಸ್ಥೆಗಳಾಗಿರುತ್ತವೆ. ಈ ಸಂಸ್ಥೆಗಳಲ್ಲಿ ಬಿಡಿ ವ್ಯಕ್ತಿಗಳ ಸದಸ್ಯತ್ವಕ್ಕೆ ಅವಕಾಶ ಇಲ್ಲದ ಕಾರಣ ಅಪೆಕ್ಸ್ ಮತ್ತು ಫೆಡರಲ್ ಸಂಘಗಳ ನಿರ್ದೇಶಕ ಮಂಡಲಿ ಚುನಾವಣೆಗೆ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮದಲ್ಲಿ ಮೀಸಲಾತಿಯನ್ನು ನಿಗದಿಪಡಿಸಲಾಗಿರುವುದಿಲ್ಲ.

**ಸಂಖ್ಯೆ: ಸಿಒ 88 ಸಿಎಲ್ಎಮ್ 2022(ಇ)**

**(ಎಸ್. ಟಿ. ಸೋಮಶೇಖರ್)**
**ಸಹಕಾರ ಸಚಿವರು**